All India Radio: Bangalore
Regional Bulletin In Kannada
ಆಕಾಶವಾಣಿ ಬೆಂಗಳೂರು

ಪ್ರದೇಶ ಸಮಾಚಾರ

04.12.2025 6.40 p.m.

**************

ಮುಖ್ಯಾಂಶಗಳು

- ದ್ವೇಷ ಭಾಷಣ ಪ್ರತಿಬಂಧಕ ವಿಧೇಯಕಕ್ಕೆ ಸಂಪುಟ ಸಭೆ ಒಪ್ಪಿಗೆ; ಬೆಂಗಳೂರಿನ ಹೆಬ್ಬಾಳದಿಂದ ಮೇಖ್ರಿ ವೃತ್ತದವರೆಗೆ ಅವಳಿ ಸುರಂಗ ರಸ್ತೆ ನಿರ್ಮಾಣಕ್ಕೆ ಅಸ್ತು
- ರೈತರಿಂದ ಮೆಕ್ಕೆಜೋಳ ಖರೀದಿಸುವಂತೆ ಕುಕ್ಕುಟ ಆಹಾರ ಉತ್ಪಾದಕರಿಗೆ ಸರ್ಕಾರ ಸೂಚನೆ
- ರಬ್ಬರ್ ಬೆಳೆಗಾರರಿಗೆ ಕೇಂದ್ರ ಸರ್ಕಾರ ಬೆಂಬಲ ಬೆಲೆ ಘೋಷಿಸುವಂತೆ ಸಚಿವ ದಿನೇಶ್ ಗುಂಡೂರಾವ್ ಆಗ್ರಹ
- ಕಾರವಾರದ ನೌಕಾನೆಲೆಯಲ್ಲಿ ನೌಕಾದಳದಿಂದ ಬೀಟಿಂಗ್ ರಿಟ್ರೀಟ್-ರಾಜ್ಯಪಾಲ ಥಾವರ್‌ಚಂದ್ ಗೆಹ್ಲೋಟ್ ಭಾಗಿ
- ಸಂಸ್ಕರಿಸಿದ ಆಹಾರ ಸೇವನೆಯ ಅಪಾಯ; ರೈತರ ಸಮಸ್ಯೆ ಬಗ್ಗೆ ಲೋಕಸಭೆಯಲ್ಲಿ ಗಮನ ಸೆಳೆದ ರಾಜ್ಯದ ಸಂಸದರು.

**************

ದ್ವೇಷ ಭಾಷಣ ಪ್ರತಿಬಂಧಕ ವಿಧೇಯಕಕ್ಕೆ ಮುಖ್ಯಮಂತ್ರಿ ಸಿದ್ದರಾಮಯ್ಯ ಅಧ್ಯಕ್ಷತೆಯಲ್ಲಿ ಇಂದು ನಡೆದ ಸಂಪುಟ ಸಭೆಯಲ್ಲಿ ಒಪ್ಪಿಗೆ ಸೂಚಿಸಲಾಗಿದೆ ಎಂದು ಕಾನೂನು ಸಚಿವ ಎಚ್.ಕೆ.ಪಾಟೀಲ್ ತಿಳಿಸಿದ್ದಾರೆ.

ಸಂಪುಟ ಸಭೆಯ ಬಳಿಕ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಧಾರ್ಮಿಕ ದತ್ತಿ ವಿಧೇಯಕ, ಬಯಲು ಸೀಮೆ ತಿದ್ದುಪಡಿ ವಿಧೇಯಕಕ್ಕೂ ಸಂಪುಟ ಹಸಿರು ನಿಶಾನೆ ತೋರಿದೆ. ೩೩೪ ಆಯುಷ್ಮಾನ್ ಆರೋಗ್ಯ ಕೇಂದ್ರಗಳ ಸ್ಥಾಪನೆಗೆ ೨೧೭ ಕೋಟಿ ವೆಚ್ಚ ಮಾಡಲು ನಿರ್ಧರಿಸಲಾಗಿದೆ ಎಂದು ಹೇಳಿದ್ದಾರೆ.

ಬೆಂಗಳೂರಿನ ಹೆಬ್ಬಾಳದಿಂದ ಮೇಖ್ರಿ ವೃತ್ತದವರೆಗೆ ಅವಳಿ ಸುರಂಗ ರಸ್ತೆ ನಿರ್ಮಾಣಕ್ಕೆ ನಿರ್ಧರಿಸಲಾಗಿದೆ ಎಂದು ಸ್ಪಷ್ಟಪಡಿಸಿದ್ದಾರೆ.

ಧ್ವನಿ: ಎಚ್.ಕೆ.ಪಾಟೀಲ್ (   ಸೆಕೆಂಡ್ಸ್)

ಇದೇ ವೇಳೆ, ಒಂದರಿಂದ ಐದನೇ ತರಗತಿ ಶಾಲಾ ಶಿಕ್ಷಕರಿಗೆ ಟಿಇಟಿ ಪ್ರಮಾಣಪತ್ರ ಅಗತ್ಯವಿಲ್ಲ ಎಂದು ಹೇಳಿದ್ದಾರೆ. ೮೦೦ ಸರ್ಕಾರಿ ಶಾಲೆಗಳನ್ನು ಉನ್ನತೀಕರಣಗೊಳಿಸಿ ಕರ್ನಾಟಕ ಪಬ್ಲಿಕ್ ಶಾಲೆಗಳನ್ನಾಗಿ ಮಾಡಲು ಅವಕಾಶ ನೀಡಿ, ಡಿಪಿಆರ್ ತಯಾರಿಸುವಂತೆ ಸೂಚನೆ ನೀಡಲಾಗಿದೆ ಎಂದು ಮಾಹಿತಿ ನೀಡಿದ್ದಾರೆ.

***************

೨೦೨೫-೨೬ ನೇ ಸಾಲಿನ ಮುಂಗಾರು ಹಂಗಾಮಿನಲ್ಲಿ ರೈತರು ಬೆಳೆದ ಮೆಕ್ಕೆಜೋಳ ಖರೀದಿಗೆ ರಾಜ್ಯ ಸರ್ಕಾರ ಅನುಮತಿ ನೀಡಿದೆ.

ಕರ್ನಾಟಕ ರಾಜ್ಯ ಸಹಕಾರ ಮಂಡಳಿ ಸಂಸ್ಥೆಯು ರೈತರಿಂದ ಖರೀದಿಸಿದ ಷರತ್ತು ಮತ್ತು ನಿಬಂಧನೆಗಳ ಅನ್ವಯ ಡಿಸ್ಟಿಲರಿಗಳಿಗೆ ಸರಬರಾಜು ಮಾಡಲು ಆದೇಶ ನೀಡಿದೆ.

ಕನಿಷ್ಠ ಬೆಂಬಲ ಬೆಲೆ ಪ್ರಕಾರ ಕುಕ್ಕುಟ ಆಹಾರ ಉತ್ಪಾದಕರಿಗೆ ಕೇಂದ್ರ ಸರ್ಕಾರ ನಿಗದಿಪಡಿಸಿದ ೨ ಸಾವಿರದ ೪೦೦ ರೂಪಾಯಿ ಕನಿಷ್ಠ ಬೆಂಬಲ ಬೆಲೆಯಲ್ಲಿ ಮೆಕ್ಕೆಜೋಳ ಖರೀದಿಸುವಂತೆ ಸೂಚಿಸಿದೆ.

***************

ಆರ್ಥಿಕ ಸಂಂಕಷ್ಟಕ್ಕೆ ಸಿಲುಕಿರುವ ರಬ್ಬರ್ ಬೆಳೆಗಾರರಿಗೆ ಕೇಂದ್ರ ಸರ್ಕಾರ ತಕ್ಷಣ ಬೆಂಬಲ ಬೆಲೆ ಘೋಷಿಸುವಂತೆ ದಕ್ಷಿಣ ಕನ್ನಡ ಜಿಲ್ಲಾ ಉಸ್ತುವಾರಿ ಸಚಿವ ದಿನೇಶ್ ಗುಂಡೂರಾವ್ ಒತ್ತಾಯಿಸಿದ್ದಾರೆ.

ಕೇಂದ್ರ ಜಲಶಕ್ತಿ ಹಾಗೂ ರೈಲ್ವೇ ಖಾತೆಗಳ ರಾಜ್ಯ ಸಚಿವ ವಿ.ಸೋಮಣ್ಣ ಅವರಿಗೆ ಪತ್ರ ಬರೆದಿರುವ ಅವರು, ದಕ್ಷಿಣ ಕನ್ನಡ ಜಿಲ್ಲೆಯ ರಬ್ಬರ್ ಬೆಳೆಗಾರರ ಆರ್ಥಿಕ ಮಟ್ಟವನ್ನು ಎತ್ತರಿಸುವುದು ಅವಶ್ಯವಾಗಿದೆ. ವಾಣಿಜ್ಯ ಬೆಳೆ ಎಂಬ ಕಾರಣ ನೀಡಿ ರಬ್ಬರನ್ನು ಕನಿಷ್ಟ ಬೆಂಬಲ ಬೆಲೆ ವ್ಯಾಪ್ತಿಯಿಂದ ಹೊರಗಿಡುವುದು ಸಮಂಜಸವಲ್ಲ ಎಂದು ತಿಳಿಸಿದ್ದಾರೆ.

ಕುಗ್ಗಿದ ಬೇಡಿಕೆ ಹಾಗೂ ಹೊರದೇಶಗಳಿಂದ ಆಮದಾಗುವ ಕಡಿಮೆ ಬೆಲೆಯ ನೈಸರ್ಗಿಕ ರಬ್ಬರ್ ಇತ್ಯಾದಿ ಕಾರಣಗಳಿಂದಾಗಿ ರಬ್ಬರ್ ಬೆಳೆಗಾರರು ಹೈರಾಣಾಗುತ್ತಿದ್ದಾರೆ. ರಬ್ಬರ್ ಬೆಳೆಗಾರರ ಸಂಕಷ್ಟಕ್ಕೆ ಕೇಂದ್ರ ಸರ್ಕಾರ ಸ್ಪಂದಿಸಬೇಕು ಎಂದು ಸಚಿವರು ಆಗ್ರಹಿಸಿದ್ದಾರೆ.

***************

ದಕ್ಷಿಣ ಕನ್ನಡ ಜಿಲ್ಲೆಯನ್ನು ಗೋಡಂಬಿ ರಫ್ತು ಹಬ್ ಆಗಿ ಕೇಂದ್ರ ಸರಕಾರ ಘೋಷಣೆ ಮಾಡಿದೆ. ಈ ಮೂಲಕ ಸಮುದ್ರ ಆಹಾರ ಉತ್ಪನ್ನ ಹಾಗೂ ಗೋಡಂಬಿಯನ್ನು ರಫ್ತು ಸಾಧ್ಯತೆಯ ಉತ್ಪನ್ನಗಳಾಗಿಯೂ ಗುರುತಿಸಲಾಗಿದೆ ಎಂದು ಸಂಸದ ಕ್ಯಾಪ್ಟನ್ ಬ್ರಿಜೇಶ್ ಚೌಟ ತಿಳಿಸಿದ್ದಾರೆ.

ದೇಶದಲ್ಲೇ ದಕ್ಷಿಣ ಕನ್ನಡ ಜಿಲ್ಲೆಯು ಸುಸ್ಥಿರ ಆರ್ಥಿಕ ಅಭಿವೃದ್ಧಿಗಾಗಿ ಕೈಗೊಂಡಿರುವ ಯತ್ನಗಳಿಗೆ ಪೂರಕವಾಗಿ ಈ ಗುರುತಿಸುವಿಕೆಯು ಗಮನಸೆಳೆದಿದೆ.

ಈ ಮೂಲಕ ಸ್ಥಳೀಯ ಕೈಗಾರಿಕೆಗಳನ್ನು ಬಲಪಡಿಸಿ ಮೌಲ್ಯಾಧರಿತ ಚಟುವಟಿಕೆಗಳನ್ನು ಹೆಚ್ಚಿಸಿ, ವಿಶ್ವ ಮಾರುಕಟ್ಟೆಗೆ ದಕ್ಷಿಣ ಕನ್ನಡ ಜಿಲ್ಲೆಯ ವ್ಯಾಪಾರವನ್ನು ಇನ್ನಷ್ಟು ಚುರುಕುಗೊಳಿಸಲು ಸಾಧ್ಯವಾಗಲಿದೆ.

***************

ನೌಕಾದಳ ದಿನಾಚರಣೆಯ ಅಂಗವಾಗಿ ಇಂದು ಉತ್ತರಕನ್ನಡ ಜಿಲ್ಲೆಯ ಕಾರವಾರದ ಅರ್ಗಾ ಬಳಿಯ ನೆವಿ ಹೌಸ್ ನಲ್ಲಿ 'ಸಂಬಂಧ್' ಮತ್ತು ಬೀಟಿಂಗ್ ರಿಟ್ರೀಟ್ ಸಮಾರಂಭ ನಡೆಯಿತು.

ಸಮಾರಂಭದ ಮುಖ್ಯ ಅತಿಥಿಯಾಗಿ ರಾಜ್ಯಪಾಲ ಥಾವರ್ ಚಂದ್ ಗೆಹ್ಲೋಟ್ ಭಾಗವಹಿಸಿದ್ದರು.

ಬೀಟಿಂಗ್ ರಿಟ್ರೀಟ್ ಸಮಾರಂಭದಲ್ಲಿ ನೌಕಾಪಡೆಯ ಬ್ಯಾಂಡ್ ಮತ್ತು ಸಂಗೀತವನ್ನು ನುಡಿಸಲಾಯಿತು.

ಸೂರ್ಯಾಸ್ತದ ಸಮಯದಲ್ಲಿ ನೌಕಾನೆಲೆಯ ಬಂದರಿನಲ್ಲಿ ಲಂಗರು ಹಾಕಲಾದ ಯುದ್ಧನೌಕೆಗಳು ಕಾರ್ಯಕ್ರಮಕ್ಕೆ ಮೆರಗು ನೀಡಿತು.

***************

ಕಪ್ ನೂಡಲ್ಸ್‌ಗಳು, ಸಿದ್ಧಪಡಿಸಿದ ಆಹಾರ ಪದಾರ್ಥಗಳು ಮತ್ತು ಸಕ್ಕರೆ ಬೆರೆಸಿದ ಪಾನೀಯಗಳಂತಹ ಸಂಸ್ಕರಿಸಿದ ಆಹಾರಗಳ ಹೆಚ್ಚಿನ ಸೇವನೆಯು ಸ್ಥೂಲಕಾಯತೆ, ಹೃದಯರಕ್ತನಾಳದ ಕಾಯಿಲೆಗಳು, ಟೈಪ್ ೨ ಮಧುಮೇಹ ಮತ್ತು ಅಕಾಲಿಕ ಮರಣದ ಅಪಾಯವನ್ನು ಹೆಚ್ಚಿಸುತ್ತದೆ ಎಂದು ಲೋಕಸಭೆಯಲ್ಲಿ ಸಂಸದ ತೇಜಸ್ವಿ ಸೂರ್ಯ ಕಳವಳ ವ್ಯಕ್ತಪಡಿಸಿದ್ದಾರೆ.

ಲೋಕಸಭೆಯಲ್ಲಿ ಇಂದು ಶೂನ್ಯವೇಳೆಯಲ್ಲಿ ವಿಷಯ ಪ್ರಸ್ತಾಪಿಸಿದ ಅವರು, ಈ ಆಹಾರ ಪದ್ಧತಿ ಯುವಜನರು ಮತ್ತು ಕಡಿಮೆ ಆದಾಯದ ಕುಟುಂಬಗಳಲ್ಲಿ ಸಾಂಪ್ರದಾಯಿಕ ಆಹಾರಗಳ ಸ್ಥಾನವನ್ನು ಕಬಳಿಸುತ್ತಿವೆ ಎಂದು ತಿಳಿಸಿದ್ದಾರೆ.

ಶಿವಮೊಗ್ಗ ಸಂಸದ ಬಿ.ವೈ.ವಿಜಯೇಂದ್ರ ಅವರು ಮಲೆನಾಡು ರೈತರ ಸಮಸ್ಯೆಗಳ ಬಗ್ಗೆ ಗಮನ ಸೆಳೆದರು. ಅಡಿಕೆ ಬೆಳೆಗಾರರು ಹಳದ ರೋಗದಿಂದ ಬಳಲುತ್ತಿದ್ದು, ಅತಿ ಹೆಚ್ಚು ಮಳೆಯಿಂದಾಗಿ ಹಾನಿಗೊಳಗಾಗಿದ್ದಾರೆ ಎಂದು ಹೇಳಿದರು.

ಬೆಂಗಳೂರು ಗ್ರಾಮಾಂತರ ಕ್ಷೇತ್ರದ ಸಂಸದ ಡಾ.ಸಿ.ಎನ್ ಮಂಜುನಾಥ್ ಅವರು ಸ್ಯಾಟಲೈಟ್ ರಿಂಗ್ ರೋಡ್ ಯೋಜನೆಯ ಕುರಿತು ಮಾತನಾಡಿದ ಅವರು, ೨೦೨೧ರಲ್ಲಿ ಯೋಜನೆಗಾಗಿ ೨ ಸಾವಿರದ ೨೦೦ ಎಕರೆ ಭೂಮಿಯನ್ನು ವಶಪಡಿಸಿಕೊಳ್ಳಲಾಗಿದೆ. ಆದರೂ, ರೈತರಿಗೆ ಈವರೆಗೂ ಪರಿಹಾರ ನೀಡಿಲ್ಲ ಎಂದು ಆಕ್ಷೇಪಿಸಿದರು. ರೈತರಿಗೆ ಕೂಡಲೇ ಪರಿಹಾರ ಬಿಡುಗಡೆ ಮಾಡಬೇಕು. ಎಂದು ಆಗ್ರಹಿಸಿದರು.

***************

ಚಿಕ್ಕಮಗಳೂರು ಜಿಲ್ಲೆಯಲ್ಲಿ ಕಳೆದ ಒಂದು ವಾರದಿಂದ ನಡೆಯುತ್ತಿದ್ದ ದತ್ತಜಯಂತಿ ಮಹೋತ್ಸವಕ್ಕೆ ಇಂದು ಶಾಂತಿಯುತವಾಗಿ ತೆರೆ ಬಿದ್ದಿದೆ.

ಉತ್ಸವದ ಕೊನೆಯ ದಿನವಾದ ಇಂದು ದತ್ತಪೀಠಕ್ಕೆ ರಾಜ್ಯದ ವಿವಿಧೆಡೆಯಿಂದ ಆಗಮಿಸಿದ ಸಾವಿರಾರು ಮಾಲಾಧಾರಿಗಳು. ದತ್ತಪಾದುಕೆಯ ದರ್ಶನ ಪಡೆದುಕೊಂಡರು. ಕೆಲವು ಭಕ್ತರು ತಾವು ತಂದಿದ್ದ ಪಡಿ ಅರ್ಪಿಸಿ ಮಾಲೆ ವಿಸರ್ಜನೆ ಮಾಡಿದ್ದಾರೆ.

ಯಾವುದೇ ಅಹಿತಕರ ಘಟನೆಗಳು ನಡೆಯದಂತೆ ಚಿಕ್ಕಮಗಳೂರು ನಗರ, ದತ್ತಪೀಠ ಸೇರಿದಂತೆ ಜಿಲ್ಲೆಯಾದ್ಯಂತ ಹೆಚ್ಚಿನ ಪೊಲೀಸ್ ಬಂದೋಬಸ್ತ್ ಮಾಡಲಾಗಿತ್ತು.

***************

ಹಾವೇರಿ ಜಿಲ್ಲೆಯಲ್ಲಿ ರೈತರು ಬೆಳೆದಿರುವ ೭.೫೦ಲಕ್ಷ ಮೆಟ್ರಿಕ್ ಟನ್ ಮೆಕ್ಕೆಜೋಳ ಖರೀದಿಸುವಂತೆ ಕೋರಿ ರಾಜ್ಯ ಸರ್ಕಾರಕ್ಕೆ ಪ್ರಸ್ತಾವ ಸಲ್ಲಿಸಲಾಗುವುದು ಎಂದು ವಿಧಾನಸಭೆ ಉಪಸಭಾಪತಿ, ಶಾಸಕ ರುದ್ರಪ್ಪ ಲಮಾಣಿ ತಿಳಿಸಿದ್ದಾರೆ.

ಹಾವೇರಿಯಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ೧೦ ಲಕ್ಷ ಮೆಟ್ರಿಕ್ ಟನ್ ಮೆಕ್ಕೆಜೋಳವನ್ನು ಖರೀದಿಸುವ ಪ್ರಕ್ರಿಯೆಗೆ ಸರ್ಕಾರ ಈಗಾಗಲೇ ಚಾಲನೆ ನೀಡಿದೆ. ರೈತರ ಎಲ್ಲ ಸಮಸ್ಯೆಗಳನ್ನು ಈಡೇರಿಸಲು ಸರ್ಕಾರ ಬದ್ಧವಿದೆ ಎಂದು ಹೇಳಿದ್ದಾರೆ.

ಸರ್ಕಾರವು ಈಗಾಗಲೇ ಮೆಕ್ಕೆಜೋಳ ಖರೀದಿ ಆರಂಭಿಸಿದ್ದು, ಇದರಿಂದಾಗಿ ಮುಕ್ತ ಮಾರುಕಟ್ಟೆಯಲ್ಲಿ ಮೆಕ್ಕೆಜೋಳದ ಬೆಲೆ ಹೆಚ್ಚಾಗಲಿದೆ ಎಂದು ಸ್ಪಷ್ಟಪಡಿಸಿದ್ದಾರೆ.

***************

ಮಕ್ಕಳಿಗೆ ಉತ್ತಮ ಶಿಕ್ಷಣ, ಆಹಾರ, ಆರೋಗ್ಯ, ವಸತಿ ಸೌಲಭ್ಯ ಕಲ್ಪಿಸಲು ಸರ್ಕಾರವು ಹಲವಾರು ಸೌಲಭ್ಯಗಳನ್ನು ಕಲ್ಪಿಸಿದೆ. ಜಿಲ್ಲೆಯ ಸರ್ಕಾರಿ ಶಾಲೆಗಳು, ವಸತಿ ನಿಲಯಗಳಲ್ಲಿ ಕಡ್ಡಾಯವಾಗಿ ಮಕ್ಕಳ ಸಂಪೂರ್ಣ ಸುರಕ್ಷತೆಗೆ ಆದ್ಯತೆ ನೀಡಬೇಕೆಂದು ಕರ್ನಾಟಕ ರಾಜ್ಯ ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗದ ಅಧ್ಯಕ್ಷರಾದ ಶಶಿಧರ್ ಕೋಸಂಬೆ ತಿಳಿಸಿದ್ದಾರೆ.

ರಾಮನಗರದಲ್ಲಿ ಡಾ. ಬಿ.ಆರ್. ಅಂಬೇಡ್ಕರ್ ವಸತಿ ಶಾಲೆಗೆ ಭೇಟಿ ನೀಡಿ ಮಕ್ಕಳ ಸುರಕ್ಷತಾ ಕ್ರಮಗಳನ್ನು ಪರಿಶೀಲಿಸಿದರು.

ಮಕ್ಕಳ ಸುರಕ್ಷತಾ ದೃಷ್ಠಿಯಿಂದ ಸಿ.ಸಿ ಟಿ.ವಿ ಕ್ಯಾಮೆರಾ ಅಳವಡಿಸಬೇಕು. ವಸತಿ ನಿಲಯದ ಸ್ವಂತ ಕಟ್ಟಡದ ಕಾಮಗಾರಿ ಶೀಘ್ರವಾಗಿ ಪ್ರಾರಂಭಿಸಲು ಸೂಕ್ತ ಕ್ರಮವಹಿಸುವಂತೆ ಸಮಾಜ ಕಲ್ಯಾಣ ಇಲಾಖೆಯ ಜಂಟಿ ನಿರ್ದೇಶಕರರಿಗೆ ಸೂಚಿಸಿದ್ದಾರೆ.

***************

ರಾಜಸ್ಥಾನದ ಜೈಪುರದಲ್ಲಿ ನಡೆಯುತ್ತಿರುವ ೫ನೇ ಆವೃತ್ತಿಯ ಖೇಲೋ ಇಂಡಿಯಾ ಯುನಿವರ್ಸಿಟಿ ಗೇಮ್ಸ್ ನಲ್ಲಿ ಬಳ್ಳಾರಿಯ ವಿಜಯನಗರ ಶ್ರೀಕೃಷ್ಣದೇವರಾಯ ವಿಶ್ವವಿದ್ಯಾಲಯದ ಲೋಕೇಶ್ ರಾಥೋಡ್ ಡೆಕಾಥ್ಲಾನ್ ವಿಭಾಗದಲ್ಲಿ ಕಂಚಿನ ಪದಕದೊಂದಿಗೆ ಮೂರನೇ ಸ್ಥಾನ ಪಡೆದಿದ್ದಾರೆ.

*******ಮುಕ್ತಾಯ********